ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ರವರು ನಿಯಮ 330ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.

## ವಿಷಯ

ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಯಡಿಯಲ್ಲಿನ ಅಲ್ಪಸಂಖ್ಯಾತ ಮಾನ್ಯತೆ ಪಡೆದ ಶಾಲಾ ಕಾಲೇಜುಗಳಲ್ಲಿ ದಿನಾಂಕ:31.12.2015ರ ಒಳಗೆ ರಾಜಿನಾಮೆ, ನಿವೃತ್ತಿ ಇನ್ನಿತರೆ ಕಾರಣಗಳಿಂದ ಖಾಲಿಯಾದ ಹುದ್ದೆಗಳನ್ನು ಭರ್ತಿಮಾಡಿಕೊಳ್ಳಲು ಅನುಮತಿ ನೀಡಲಾಗಿದೆ. ಆದರೆ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳಲ್ಲಿ (ಮೈನಾರಿಟಿ ಸ್ಟೇಟಸ್) ಖಾಲಿ ಇರುವ ಬೋಧಕ/ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಇತ್ತೀಚೆಗೆ ಶೇ.25% ಮೈನಾರಿಟಿ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ಕಡ್ಡಾಯಗೊಳಿಸಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ವಸತಿ, ವಕ್ಫ್ ಅಲ್ಪಸಂಖ್ಯಾತರ ಕಲ್ಯಾಣ ಸಚಿವರಲ್ಲಿ ಪ್ರಸ್ತಾಪಿಸಬಯಸುತ್ತೇನೆ.

## ಉತ್ತರ

ಸರ್ಕಾರದ ಆದೇಶ ಸಂಖ್ಯೆ: ಇಡಿ 27 ಮಾಹಿತಿ 2012(ಭಾಗ–01), ದಿನಾಂಕ: 18.06.2014ರ ಆದೇಶದ ಕ್ರಮ ಸಂಖ್ಯೆ:8 ಉಪಕ್ರಮ ಸಂಖ್ಯೆ: 4 ರಲ್ಲಿ "ಅಲ್ಪಸಂಖ್ಯಾತ ಸಂಸ್ಥೆ ಶಾಲೆಗಳೆಂದು ಘೋಷಿಸಲು ಆ ಶಾಲೆಗಳು ಆಯಾ ಶೈಕ್ಷಣಿಕ ವರ್ಷದಲ್ಲಿ ಕಡ್ಡಾಯವಾಗಿ ಕನಿಷ್ಠ ಶೇ.25ರಷ್ಟು ಆಯಾ ಭಾಷಾ/ ಆಯಾ ಮತೀಯ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳನ್ನು ಹೊಂದಿರಬೇಕು" ಎಂದು ಆದೇಶಿಸಲಾಗಿದ್ದು, ಸದರಿ ಆದೇಶವು ಚಾಲ್ತಿಯಲ್ಲಿರುತ್ತದೆ. (ಸರ್ಕಾರದ ಆದೇಶದ ಪ್ರತಿ ಲಗತ್ತಿಸಿದೆ)

**ಇಪಿ 16 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು